All India Radio: Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

02.03.2026 6.40 p.m.

***************

ಮುಖ್ಯಾಂಶಗಳು

- ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಸಿಲುಕಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರುವಂತೆ ಪ್ರಧಾನಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ
- ಟಿ.ನರಸೀಪುರದ ರೇಷ್ಮೆ ಕಾರ್ಖಾನೆ ಮುಚ್ಚುವುದಿಲ್ಲ- ಸಚಿವ ಡಾ.ಎಚ್.ಸಿ.ಮಹದೇವಪ್ಪ ಸಪ್ಷನೆ
- ಮದ್ದೂರು ನಗರಸಭೆ ವ್ಯಾಪ್ತಿಯ ನಾಲ್ಕು ಗ್ರಾಮಗಳ ಸೇರ್ಪಡೆ ಕೈಬಿಡುವಂತೆ ಮುಖ್ಯಮಂತ್ರಿಗೆ ಕೇಂದ್ರ ಸಚಿವ ಕುಮಾರಸ್ವಾಮಿ ಪತ್ರ
- ರಾಜ್ಯದ ವೈದ್ಯರು ಹಾಗೂ ದಾದಿಯರಿಗೆ ವಿದೇಶಗಳಲ್ಲಿ ಭಾರೀ ಬೇಡಿಕೆ- ಸಚಿವ ಡಾ.ಶರಣಪ್ರಕಾಶ್ ಪಾಟೀಲ್
- ಜಿಬಿಎ ವ್ಯಾಪ್ತಿಯಲ್ಲಿ ಕಡಿಮೆ ಮೌಲ್ಯಯುತ ಪ್ಲಾಸ್ಟಿಕ್ ಸಂಗ್ರಹ ಪ್ರಮಾಣದಲ್ಲಿ ಗಣನೀಯ ವೃದ್ಧಿ

***************

ಇರಾನ್-ಇಸ್ರೇಲ್ ಸಂಘರ್ಷದ ಹಿನ್ನೆಲೆಯಲ್ಲಿ ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಸಿಲುಕಿರುವ ಕನ್ನಡಿಗರು ಹಾಗೂ ಭಾರತಿಯರನ್ನು ಸುರಕ್ಷಿತವಾಗಿ ಭಾರತಕ್ಕೆ ಕರೆತರಲು ಸಹಾಯ ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರದ ಮೂಲಕ ಮನವಿ ಮಾಡಿದ್ದಾರೆ.

ದುಬೈನಲ್ಲಿ ಅನೇಕರು ಸಿಲುಕಿಕೊಂಡಿದ್ದು, ಅವರನ್ನು ಕರೆತರಲು ವಿದೇಶಾಂಗ ಸಚಿವಾಲಯ ಹಾಗೂ ನಾಗರಿಕ ವಿಮಾನಯಾನ ಸಚಿವಾಲಯದೊಂದಿಗೆ ಸಮನ್ವಯತೆ ಸಾಧಿಸುವಂತೆ ಪತ್ರದಲ್ಲಿ ತಿಳಿಸಿದ್ದಾರೆ.

ಸಂಕಷ್ಟದಲ್ಲಿರುವವರನ್ನು ಪತ್ತೆಹಚ್ಚಲು ಮತ್ತು ಅವರ ಕುಟುಂಬಗಳಿಗೆ ಮಾಹಿತಿ ನೀಡಲು ಕೇಂದ್ರೀಕೃತ ಡಿಜಿಟಲ್ ವ್ಯವಸ್ಥೆ ರೂಪಿಸುವುದು, ಟಿಕೆಟ್ ಮರುಹೊಂದಾಣಿಕೆ ಹಾಗೂ ದಂಡ ವಿಧಿಸದಂತೆ ವಿಮಾನಯಾನ ಸಂಸ್ಥೆಗಳಿಗೆ ಸೂಚಿಸುವಂತೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

***************

ಇಸ್ರೆಲ್- ಇರಾನ್ ಸಂಘರ್ಷದಿಂದ ವಿಮಾನಗಳು ರದ್ದಾಗಿರುವ ಹಿನ್ನೆಲೆಯಲ್ಲಿ ದುಬೈನಲ್ಲಿ ಸಿಲುಕಿರುವ ವಿಧಾನ ಪರಿಷತ್ ಸದಸ್ಯ ಎಸ್.ಎಲ್ ಬೋಜೇಗೌಡ ಅವರು ಸುರಕ್ಷಿತವಾಗಿರುವುದಾಗಿ ತಿಳಿಸಿದ್ದಾರೆ. ವೀಡಿಯೋ ಸಂದೇಶದ ಮೂಲಕ ಮಾಹಿತಿ ನೀಡಿರುವ ಅವರು, ಸರ್ಕಾರ ಉಳಿದ ಕನ್ನಡಿಗರ ರಕ್ಷಣೆಗೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.

ದುಬೈನಲ್ಲಿ ಆತಂಕದ ವಾತವರಣವಿದ್ದು, ವಿಮಾನ ನಿಲ್ದಾಣದಲ್ಲಿರುವ ಕನ್ನಡಿಗರನ್ನು ಭಾರತಕ್ಕೆ ಕರೆಸಿಕೊಳ್ಳಲು ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದ್ದಾರೆ.

ಧ್ವನಿ : ಎಸ್.ಎಲ್ ಬೋಜೇಗೌಡ ( ೩೦   ಸೆಕೆಂಡ್ಸ್)

****************

ಮಧ್ಯಪ್ರಾಚ್ಯದ ಕೆಲವು ದೇಶಗಳಲ್ಲಿ ಉಂಟಾಗಿರುವ ಅಸ್ಥಿರತೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತಗಳು ಸಹಾಯವಾಣಿ ಸಂಖ್ಯೆಯನ್ನು ಬಿಡುಗಡೆ ಮಾಡಿವೆ.

ಚಾಮರಾಜನಗರ ಜಿಲ್ಲೆಯ ನಿವಾಸಿಗಳು ಅಥವಾ ಅವರ ಸಂಬಂಧಿಕರು ಹೆಚ್ಚಿನ ಮಾಹಿತಿಗಾಗಿ ಚಾಮರಾಜನಗರ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರದ ಸಹಾಯವಾಣಿ ಸಂಖ್ಯೆ ೦೮೨೨೬-೨೨೩೧೬೦, ೨೨೩೧೬೧, ೨೨೩೧೬೩ ಹಾಗೂ ಮೊಬೈಲ್ ಸಂಖ್ಯೆ ೯೭೪೦೯-೪೨೯೦೧ ಸಂಪರ್ಕಿಸಬಹುದು.

ವಿಜಯಪುರ ಜಿಲ್ಲೆಯ ನಿವಾಸಿಗಳು ಅಥವಾ ಅವರ ಸಂಬಂಧಿಕರು ಹೆಚ್ಚಿನ ಮಾಹಿತಿಗಾಗಿ ೦೮೩೫೨-೨೨೧೨೬೧,೨೨೨೧೦೧, ೧೦೭೭ ಟೋಲ್ ಫ್ರೀ ಸಂಖ್ಯೆ ಹಾಗೂ ವಿಜಯಪುರದ ಜಿಲ್ಲಾ ವಿಪತ್ತು ನಿರ್ವಹಣಾ ಘಟಕದ ರಾಕೇಶ್ ಜೈನಾಪುರರ ಮೊಬೈಲ್ ಸಂಖ್ಯೆ ೭೦೧೯೬-೮೨೭೪೦ ಗೆ ಸಂಪರ್ಕಿಸಬಹುದಾಗಿದೆ.

ಉಡುಪಿ ಜಿಲ್ಲೆಯ ನಿವಾಸಿಗಳು ಹೆಚ್ಚಿನ ಮಾಹಿತಿಗಾಗಿ ಉಡುಪಿ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ : ೦೮೨೦-೨೫೭೪೮೦೨ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ ದೂರವಾಣಿ ಸಂಖ್ಯೆ: ೦೮೦-೨೨೩೪೦೬೭೬, ಹಾಗೂ ಟೋಲ್ ಫ್ರೀ ಸಂಖ್ಯೆ: ೧೦೭೦ ಗೆ ಕರೆ ಮಾಡಿ ಮಾಹಿತಿ ಹಾಗೂ ಸಹಾಯ ಪಡೆಯಬಹುದಾಗಿದೆ.

****************

ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದಿಂದ ಕೊಲ್ಲಿ ರಾಷ್ಟ್ರಗಳಲ್ಲಿರುವ ಕನ್ನಡಿಗರ ರಕ್ಷಣೆಗೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಟಿ.ನರಸೀಪುರದ ಐತಿಹಾಸಿಕ ರೇಷ್ಮೆ ಕಾರ್ಖಾನೆ ಮುಚ್ಚಲಾಗುತ್ತಿದೆ ಎಂಬ ವದಂತಿಗಳನ್ನು ತಳ್ಳಿಹಾಕಿದ್ದಾರೆ.

ರೇಷ್ಮೆ ಕಾರ್ಖಾನೆ ಉಳಿಸಿ ಬೆಳೆಸುವುದು ಸರ್ಕಾರದ ಆದ್ಯತೆಯಾಗಿದ್ದು, ಯಾವುದೇ ಕಾರಣಕ್ಕೂ ಕಾರ್ಖಾನೆಗೆ ಕುಂದು ತರುವ ಕೆಲಸ ಮಾಡುವುದಿಲ್ಲ ಎಂದು ಭರವಸೆ ನೀಡಿದ್ದಾರೆ.

ರೇಷ್ಮೆ ಕಾರ್ಖಾನೆ ಕಾರ್ಮಿಕರು ಮತ್ತು ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

***************

ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಗೆಜ್ಜಲಗೆರೆ, ಗೊರವನಹಳ್ಳಿ, ಚಾಮನಹಳ್ಳಿ, ಸೋಮನಹಳ್ಳಿ ಸೇರಿದಂತೆ ವಿವಿಧ ಪ್ರದೇಶಗಳನ್ನು ಸ್ಥಳೀಯರ ಆಶಯಗಳಿಗೆ ವಿರುದ್ಧವಾಗಿ ಮದ್ದೂರು ನಗರಸಭೆ ವ್ಯಾಪ್ತಿಗೆ ಸೇರಿಸಲಾಗಿದೆ. ರಾಜ್ಯ ಸರ್ಕಾರ ಕೂಡಲೇ ಈ ನಿರ್ಧಾರವನ್ನು ಕೈಬಿಡಬೇಕು ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಈ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಅವರು, ಜನಾಭಿಪ್ರಾಯ ಪರಿಗಣಿಸದೆ ಜನತೆಯ ನಿಲುವುಗಳಿಗೆ ವಿರುದ್ಧವಾಗಿ ಹೋಗಬಾರದು. ಈ ಹಿನ್ನೆಲೆಯಲ್ಲಿ ತಾವು ಮಧ್ಯಪ್ರವೇಶ ಮಾಡಿ ಇದಕ್ಕೆ ತಡೆನೀಡಬೇಕು ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

ಯಾವುದೇ ಕಾರಣಕ್ಕೂ ಮದ್ದೂರು ನಗರಸಭೆ ವ್ಯಾಪ್ತಿಗೆ ಈ ಗ್ರಾಮಗಳನ್ನು ಸೇರಿಸಬಾರದು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

***************

ಇ-ಸ್ವತ್ತು ೨.೦ ತಂತ್ರಾಂಶದಡಿ ಇದುವರೆಗೆ ರಾಜ್ಯದಲ್ಲಿ ೧ ಲಕ್ಷ ೧೪ ಸಾವಿರದ ೬೦೭ ಅರ್ಜಿಗಳನ್ನು ಅನುಮೋದಿಸಿ ವಿಲೇವಾರಿ ಮಾಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸಾರ್ವಜನಿಕರಿಂದ ಇದುವರೆಗೆ ಒಟ್ಟು ೧ ಲಕ್ಷ ೩೮ ಸಾವಿರದ ೪೭೦ ಅರ್ಜಿಗಳು ಸ್ವೀಕೃತವಾಗಿದ್ದು, ೨೩ ಸಾವಿರದ ೫೬೩ ಅರ್ಜಿಗಳು ಅನುಮೋದನೆಗಾಗಿ ಬಾಕಿ ಉಳಿದಿವೆ ಎಂದು ಮಾಹಿತಿ ನೀಡಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನಲ್ಲಿಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ಸಭೆ ನಡೆಸಿ ಇಲಾಖೆಯ ಕಾರ್ಯವೈಖರಿಯನ್ನು ಪರಿಶೀಲಿಸಿದರು.

***************

ಭಾರತದಲ್ಲಿ ತರಬೇತಿ ಪಡೆಯುವ ವೈದ್ಯರು ಹಾಗೂ ಶುಶ್ರೂಷಕರ ಸೇವೆಗೆ ಅನೇಕ ದೇಶಗಳಲ್ಲಿ ಅಪಾರ ಬೇಡಿಕೆ ಇದೆ ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಹೇಳಿದ್ದಾರೆ.

ಯಾದಗಿರಿಯಲ್ಲಿ ನಿರ್ಮಾಣವಾಗಲಿರುವ ನೂತನ ಸರ್ಕಾರಿ ನರ್ಸಿಂಗ್ ಕಾಲೇಜು ಕಟ್ಟಡ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಈಗಾಗಲೇ ೨೨ ಜಿಲ್ಲೆಗಳಲ್ಲಿ ಕಾಲೇಜುಗಳು ಕಾರ್ಯಾರಂಭ ಮಾಡಿದ್ದು, ಉಳಿದ ಜಿಲ್ಲೆಗಳಲ್ಲೂ ಆರಂಭಿಸಲು ಪ್ರಯತ್ನಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ದೇಶದಲ್ಲೇ ಅತಿ ಹೆಚ್ಚು ನರ್ಸಿಂಗ್ ಕಾಲೇಜುಗಳಿದ್ದು, ಜಪಾನ್, ಇಟಲಿ, ಜರ್ಮನಿ ದೇಶಗಳಿಂದ ಶುಶ್ರೂಷಕರ ಮತ್ತು ವೈದ್ಯರ ಅವಶ್ಯಕತೆ ಕುರಿತು ಮನವಿ ಬಂದಿದೆ ಎಂದು ಮಾಹಿತಿ ನೀಡಿದ್ದಾರೆ.

****************

ಜಿಬಿಎ ವ್ಯಾಪ್ತಿಯಲ್ಲಿ ಕಡಿಮೆ ಮೌಲ್ಯಯುತ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹ ಪ್ರಮಾಣದಲ್ಲಿ ಗಣನೀಯ ವೃದ್ಧಿ ಕಂಡುಬಂದಿದೆ. ಪ್ರತಿನಿತ್ಯ ಸುಮಾರು ೫೨೦ ಮೆಟ್ರಿಕ್ ಟನ್ ಕಡಿಮೆ ಮೌಲ್ಯಯುತ ಪ್ಲಾಸ್ಟಿಕ್ ಸಂಗ್ರಹಿಸಲಾಗುತ್ತಿದೆ ಎಂದು ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕರೀಗೌಡ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಪ್ರತಿದಿನ ಸರಾಸರಿ ೬ ಸಾವಿರ ಮೆಟ್ರಿಕ್ ಟನ್ ಘನತ್ಯಾಜ್ಯ ಉತ್ಪತ್ತಿಯಾಗುತ್ತಿದೆ. ಅದರಲ್ಲಿ ಸುಮಾರು ೫೨೦ ಮೆಟ್ರಿಕ್ ಟನ್ ಕಡಿಮೆ ಮೌಲ್ಯಯುತ ಪ್ಲಾಸ್ಟಿಕ್ ಸಂಗ್ರಹಿಸಲಾಗುತ್ತಿದೆ. ಈ ಪ್ರಮಾಣವನ್ನು ೧ ಸಾವಿರ ಮೆಟ್ರಿಕ್ ಟನ್‌ಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ.

ದೊಡ್ಡಬಳ್ಳಾಪುರ ತಾಲ್ಲೂಕಿನ ದೊಡ್ಡಬೆಳವಂಗಳ ಹೋಬಳಿಯ ಗುಂಡಲಹಳ್ಳಿ ಗ್ರಾಮದ ಟೆರ್ರಾ ಫಾರ್ಮ್ ಪ್ರದೇಶ ಹಾಗೂ ಬೆಂಗಳೂರು ದಕ್ಷಿಣ ವ್ಯಾಪ್ತಿಯ ಗೊಲ್ಲಹಳ್ಳಿಯಲ್ಲಿ ಸರ್ಕಾರಿ ಜಾಗ ಸೇರಿದಂತೆ ಸಮಗ್ರ ಘನತ್ಯಾಜ್ಯ ನಿರ್ವಹಣಾ ಯೋಜನೆಗಾಗಿ ಎರಡೂ ಕಡೆ ೧೦೦ ಎಕರೆಗೂ ಹೆಚ್ಚು ಜಾಗ ಗುರುತಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ವಿಜಯಪುರದ ಹಂಚನಾಳ ಬಳಿಯ ಕೆರೆಗೆ ನಗರದ ಒಳ ಚರಂಡಿಯಿಂದ ಜಮೆಯಾಗುತ್ತಿರುವ ಕಲುಷಿತ ನೀರಿನಿಂದಾಗಿ ಸುತ್ತಮುತ್ತಲಿನ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಈ ಭಾಗದ ಜನರಿಗೆ ಶೀಘ್ರವೇ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ವಹಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನಗರದ ಒಳಚರಂಡಿ ಸಂಸ್ಕರಣಾ ಘಟಕದಿಂದ ಕೊಳಚೆ ನೀರು ಕೆರೆ ಸೇರದಂತೆ ಹಾಲಿ ಇರುವ ಎಸ್‌ಟಿಪಿಯನ್ನು ಉನ್ನತೀಕರಿಸಿ ಸಂಸ್ಕರಿಸಿದ ಶುದ್ಧ ನೀರನ್ನು ಮಾತ್ರ ಹಂಚಿನಾಳ ಕೆರೆಗೆ ಬಿಡಬೇಕೆಂದು ಪಾಲಿಕೆ ಆಯುಕ್ತರಿಗೆ ನಿರ್ದೇಶನ ನೀಡಿದ್ದಾರೆ.

***************

ಕಲಬುರಗಿಯಲ್ಲಿ ನಡೆಯುತ್ತಿರುವ ಐಟಿಎಫ್ ಡಬ್ಲ್ಯು-೨೫ ಟೆನ್ನಿಸ್ ಪಂದ್ಯಾವಳಿಯಲ್ಲಿ ಐವರು ಭಾರತೀಯರು ಮುಖ್ಯ ಸುತ್ತಿಗೆ ಅರ್ಹತೆ ಪಡೆದಿದ್ದಾರೆ.

ಸಿಂಗಲ್ಸ್‌ನಲ್ಲಿ ಮೂರನೇ ಶ್ರೇಯಾಂಕದ ವೈಷ್ಣವಿ ಅಡ್ಕರ್ ಚೆವಿಕಾ ರೆಡ್ಡಿ, ಐದನೇ ಶ್ರೇಯಾಂಕ ಜೀಲ್ ದೇಸಾಯಿ, ಎಂಟನೇ ಶ್ರೇಯಾಂಕದ ಅಂಕಿತಾ ರೈನಾ, ಸೋನಲ್ ಪಾಟೀಲ್ ಮುಖ್ಯ ಸುತ್ತಿನಲ್ಲಿ ಕಣಕ್ಕಿಳಿಯುತ್ತಿದ್ದಾರೆ.

ವಿಜೇತರಿಗೆ ೨೦ ಸಾವಿರ ಅಮೆರಿಕನ್ ಡಾಲರ್ ಬಹುಮಾನ ಮೊತ್ತ ಘೋಷಿಸಲಾಗಿದೆ.

***************

ಆಂಧ್ರಪ್ರದೇಶದ ಶ್ರೀಶೈಲದಲ್ಲಿ ಇದೇ ೧೬ ರಿಂದ ೨೦ರವರೆಗೆ ಯುಗಾದಿ ಮಹೋತ್ಸವ ನಡೆಯಲಿದೆ.

ಉತ್ಸವ ದಿನಗಳಲ್ಲಿ ಮಾತ್ರ ಮಲ್ಲಿಕಾರ್ಜುನ ಸ್ವಾಮಿಯ ಅಲಂಕಾರಿಕ ದರ್ಶನಕ್ಕೆ ಅವಕಾಶ ನೀಡಲಾಗಿದೆ. ಉತ್ಸವ ಪ್ರಾರಂಭವಾಗುವ ಮೊದಲ ಹತ್ತು ದಿನಗಳವರೆಗೆ ಪ್ರತಿನಿತ್ಯ ನಿರ್ಧಿಷ್ಟ ಸಮಯಗಳಲ್ಲಿ ನಾಲ್ಕು ಹಂತಗಳಾಗಿ ಸ್ವಾಮಿಯ ಸ್ಪರ್ಶ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

ರಾಜ್ಯದಿಂದ, ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕದಿಂದ ಸಹಸ್ರಾರು ಭಕ್ತರು, ಶ್ರೀಶೈಲಕ್ಕೆ ಪಾದಯಾತ್ರೆ ಮೂಲಕ ತೆರಳುತಿದ್ದಾರೆ.

***************

ಸಂಕ್ಷಿಪ್ತ ಸುದ್ದಿಗಳು

೧. ಹಾಸನದಲ್ಲಿ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಕೇಂದ್ರಕ್ಕೆ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಭೇಟಿ ರಾಗಿ ಖರೀದಿಯ ಗುಣಮಟ್ಟ ಪರಿಶೀಲಿಸಿದರು. ಬಳಿಕ ಮಾತನಾಡಿದ ಅವರು ಆಲೂರು ಹಾಗೂ ಸಕಲೇಶಪುರ ಕೇಂದ್ರ ಹೊರತು ಪಡಿಸಿ ಇತರೆ ಎಲ್ಲಾ ಕೇಂದ್ರಗಳಲ್ಲಿ ರಾಗಿ ಖರೀದಿ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ತಿಳಿಸಿದ್ದಾರೆ.

*******ಮುಕ್ತಾಯ********